# All India Radio: Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.09.2026  19.35**

**<><><><>**

ಮುಖ್ಯಾಂಶಗಳು

1. ಜಾಗತಿಕ ಮಟ್ಟದಲ್ಲಿ ಮುಂದಾಳತ್ವ ವಹಿಸಲು ಭಾರತೀಯ ಉದ್ದಿಮೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಕರೆ
2. ವಿದ್ಯಾರ್ಥಿಗಳಲ್ಲಿ ನಾಗರಿಕಪ್ರಜ್ಞೆ ಮತ್ತು ಚಾರಿತ್ರ್ಯ ನಿರ್ಮಾಣಕ್ಕೆ ಆದ್ಯತೆ ನೀಡುವಂತೆ ಶಿಕ್ಷಣ ಸಂಸ್ಥೆಗಳಿಗೆ ಉಪರಾಷ್ಟ್ರಪತಿ ಸಲಹೆ
3. ೨೦೨೯ರ ವೇಳೆಗೆ ದೇಶವನ್ನು ಮಾದಕವಸ್ತು ಮುಕ್ತಗೊಳಿಸಲು ೩ ವರ್ಷಗಳ ಮಾರ್ಗಸೂಚಿ - ಕೇಂದ್ರ ಸಚಿವ ಅಮಿತ್ ಶಾ ಘೋಷಣೆ
4. ನವದೆಹಲಿಯ ಸತ್ಯನಿಕೇತನದಲ್ಲಿ ಬಹುಮಹಡಿ ಕಟ್ಟಡ ಕುಸಿತ ; ಓರ್ವ ಸಾವು, ರಕ್ಷಣೆ ಮತ್ತು ಪರಿಹಾರ ಕಾರ್ಯಾಚರಣೆ ಚುರುಕು
5. ಚೀನಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ; ಭಾರತದ ಸಾತ್ವಿಕ್, ಚಿರಾಗ್ ಜೋಡಿಗೆ ಐತಿಹಾಸಿಕ ಪುರುಷರ ಡಬಲ್ಸ್ ಪ್ರಶಸ್ತಿ

<><><><>

ಜಾಗತಿಕ ಕಂಪನಿಗಳನ್ನು ಭಾರತೀಯ ಪ್ರತಿಭೆಗಳು ಮುನ್ನಡೆಸುತ್ತಿರುವಾಗ ಭಾರತೀಯ ಉದ್ದಿಮೆಗಳು ಜಾಗತಿಕ ಮಟ್ಟದಲ್ಲಿ ಮುಂದಾಳತ್ವ ವಹಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ದೆಹಲಿಯ ಶ್ರೀರಾಮ್ ವಾಣಿಜ್ಯ ಕಾಲೇಜು ಸಂಸ್ಥೆಯ ಶತಮಾನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಯುವಜನತೆ ಕೃತಕಬುದ್ಧಿಮತ್ತೆ, ಡ್ರೋನ್ ತಂತ್ರಜ್ಞಾನ ಮತ್ತು ಯೂನಿಕಾರ್ನ್‌ಗಳನ್ನು ನಿರ್ಮಿಸುವತ್ತ ಗಮನ ಹರಿಸಬೇಕು ಎಂದು ಕರೆ ನೀಡಿದರು. ಜಾಗತಿಕ ಸವಾಲುಗಳ ನಡುವೆಯೂ ಭಾರತ ಶೇಕಡ ೭.೮ ರಷ್ಟು ತ್ರೈಮಾಸಿಕ ಬೆಳವಣಿಗೆ ಸಾಧಿಸಿದೆ ಎಂದು ಪ್ರಧಾನಿ ಮೇಕ್ ಇನ್ ಇಂಡಿಯಾ ಮೂಲಕ ದೇಶದ ರಕ್ಷಣಾ ಉತ್ಪಾದನೆ ೨ ಲಕ್ಷ ಕೋಟಿ ರೂಪಾಯಿ ಹಾಗೂ ಸ್ಮಾರ್ಟ್ ಫೋನ್ ರಫ್ತು ೨.೫ ಲಕ್ಷ ಕೋಟಿ ರೂಪಾಯಿ ದಾಟಿದೆ ಎಂದು ಪ್ರಧಾನಿ ತಿಳಿಸಿದರು. ರಕ್ಷಣಾ ರಫ್ತು ಕೂಡ ೪೦ ಸಾವಿರ ಕೋಟಿ ರೂಪಾಯಿಗೆ ಏರಿಕೆಯಾಗಿದೆ. ಕಳೆದ ೧೨ ವರ್ಷಗಳಲ್ಲಿ ಶೇಕಡ ೧೦೦ರಷ್ಟು ರೈಲ್ವೆ ವಿದ್ಯುದ್ಧೀಕರಣ ಸಾಧಿಸಲಾಗಿದ್ದು, ಕ್ಷಿಪ್ರ ಮೂಲಸೌಕರ್ಯ ವಿಸ್ತರಣೆ ಮತ್ತು ಮುಕ್ತ ವ್ಯಾಪಾರ ಒಪ್ಪಂದಗಳು ಯುವ

ಸಮೂಹಕ್ಕೆ ನೂತನ ಅವಕಾಶಗಳನ್ನು ಸೃಷ್ಟಿಸುತ್ತಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><><><>

ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳನ್ನು ಕೇವಲ ವೃತ್ತಿಜೀವನಕ್ಕೆ ಸಿದ್ಧಗೊಳಿಸುವುದಕ್ಕೆ ಸೀಮಿತವಾಗದೆ, ಪ್ರಜಾಪ್ರಭುತ್ವ ಮತ್ತು ಸಮಾಜಕ್ಕೆ ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸುವ ನಿಟ್ಟಿನಲ್ಲಿ ಗಮನಹರಿಸಬೇಕು ಎಂದು ಉಪರಾಷ್ಟ್ರಪತಿ ಸಿ. ಪಿ. ರಾಧಾಕೃಷ್ಣನ್ ಪ್ರತಿಪಾದಿಸಿದ್ದಾರೆ. ಗುವಾಹಾಟಿಯಲ್ಲಿಂದು ನಡೆದ ಗೀತಾನಗರ ಕಾಲೇಜಿನ ಸುವರ್ಣ ಮಹೋತ್ಸವ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರದ ಪ್ರಗತಿಗೆ ಗುಣಮಟ್ಟದ ಶಿಕ್ಷಣ, ಸಂಶೋಧನೆ ಮತ್ತು ಚಾರಿತ್ರ್ಯ ನಿರ್ಮಾಣ ಅತ್ಯಗತ್ಯ ಎಂದು ಪ್ರತಿಪಾದಿಸಿದರು. ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಮಹಿಳೆಯರ ಸಾಧನೆ ಹೆಚ್ಚುತ್ತಿರುವುದನ್ನು ಶ್ಲಾಘಿಸಿದ ಅವರು, ಇದು 'ನಾರಿ ಶಕ್ತಿ'ಯ ನೈಜ ಪ್ರತಿಬಿಂಬವಾಗಿದೆ ಹಾಗೂ ಸೂಕ್ತ ಶಿಕ್ಷಣ ಮತ್ತು ಅವಕಾಶಗಳನ್ನು ನೀಡುವ ಮೂಲಕ ಮಹಿಳೆಯರ ಸ್ವಾವಲಂಬನೆಗೆ ಹಾದಿ ಸುಗಮವಾಗಲಿದೆ ಎಂದರು.

<><><><>

1೨೦೨೯ರ ವೇಳೆಗೆ ಭಾರತವನ್ನು ಸಂಪೂರ್ಣವಾಗಿ ಮಾದಕವಸ್ತು ಮುಕ್ತಗೊಳಿಸಲು ಮೂರು ವರ್ಷಗಳ ಸಮಗ್ರ ಮಾರ್ಗಸೂಚಿ ಸಿದ್ಧಪಡಿಸಲಾಗಿದ್ದು, ಮಾದಕವಸ್ತುಗಳ ವಿರುದ್ಧ ರಾಷ್ಟ್ರವ್ಯಾಪಿ ಸಂಘಟಿತ ಅಭಿಯಾನಕ್ಕೆ ಕರೆ ನೀಡಲಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಗೋವಾ ಪ್ರವಾಸದಲ್ಲಿರುವ ಅವರು, ಸುದ್ದಿಗಾರರೊಂದಿಗೆ ಮಾತನಾಡಿ, ೨೦೧೯ರಿಂದೀಚೆಗೆ ಕೇಂದ್ರ ಸರ್ಕಾರ ಕಾನೂನು ಅನುಷ್ಠಾನ, ಗುಪ್ತಚರ ಮಾಹಿತಿ ವಿನಿಮಯ, ಆರ್ಥಿಕ ತನಿಖೆ ಮತ್ತು ಪುನರ್ ವಸತಿ ಕ್ರಮಗಳನ್ನು ಗಣನೀಯವಾಗಿ ಬಲಪಡಿಸಿವೆ ಎಂದರು. ಗುಪ್ತಚರ ಮತ್ತು ಕಾರ್ಯಾಚರಣೆ ಆಧಾರಿತ ಕಾನೂನು ಜಾರಿ, ಸಿಂಥೆಟಿಕ್ ಮತ್ತು ಪ್ರಿಕರ್ಸರ್ ಮಾದಕವಸ್ತು ನಿಯಂತ್ರಣ, ಮಾದಕವಸ್ತುಗಳ ಬೇಡಿಕೆ ಮತ್ತು ಹಾನಿ ತಗ್ಗಿಸುವಿಕೆ ಹಾಗೂ ಸಾಮರ್ಥ್ಯವೃದ್ಧಿ ಮತ್ತು ವಿವಿಧ ಇಲಾಖೆಗಳ ಸಮನ್ವಯತೆ ಎಂಬ ೪ ಪ್ರಮುಖ ಅಂಶಗಳನ್ನು ಈ ನೂತನ ಮಾರ್ಗಸೂಚಿ ಆಧರಿಸಿದೆ ಎಂದು ಸಚಿವರು ತಿಳಿಸಿದರು. ಮುಂಬರುವ ಮೂರು ವರ್ಷಗಳಲ್ಲಿ ೧೦೦ ಅಂತಾರಾಷ್ಟ್ರೀಯ ಮತ್ತು ಅಂತರ್‌ರಾಜ್ಯ ಮಾದಕವಸ್ತು ಜಾಲ ಧ್ವಂಸಗೊಳಿಸುವುದು, ವಿದೇಶಗಳಲ್ಲಿರುವ ೧೦೦ ಮಾದಕದ್ರವ್ಯ ಅಪರಾಧಿಗಳನ್ನು ಭಾರತಕ್ಕೆ ಹಸ್ತಾಂತರಿಸುವುದು ಮತ್ತು ೧೦೦ ಅಕ್ರಮ ಮಾದಕದ್ರವ್ಯ ಪ್ರಯೋಗಾಲಯಗಳನ್ನು ನಾಶಪಡಿಸುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ತಿಳಿಸಿದರು.

<><><><>

ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು ಅಂಗೀಕರಿಸಿದ ಸಮಾನ-ಕ್ಷೇತ್ರ ವಿಶ್ವ ಭೂಪಟ ಕುರಿತ ನಿರ್ಣಯದ ಪರವಾಗಿ ಭಾರತ ಮತ ಚಲಾಯಿಸಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ. ಗ್ಲೋಬಲ್ ಕಾರ್ಟೋಗ್ರಾಫಿಕ್ ಪ್ರಾತಿನಿಧ್ಯವನ್ನು ಮರುಸರಿದೂಗಿಸುವುದು ಮತ್ತು ವಿಶ್ವದ ಪ್ರದೇಶಗಳ, ವಿಶೇಷವಾಗಿ ಆಫ್ರಿಕಾದ ಸಮಾನ ಪ್ರಾತಿನಿಧ್ಯವನ್ನು ಉತ್ತೇಜಿಸುವುದು ಎಂಬ ಶೀರ್ಷಿಕೆಯ ನಿರ್ಣಯವನ್ನು ವಿಶ್ವಸಂಸ್ಥೆಯು ಸೆಪ್ಟೆಂಬರ್ ೪ ರಂದು ಅಂಗೀಕರಿಸಿದೆ. ಸಂಸದೀಯ ಮತ್ತು ರಾಜತಾಂತ್ರಿಕ ಮಟ್ಟದಲ್ಲಿ ವಿಷಯವನ್ನು ಸ್ಪಷ್ಟಪಡಿಸಿದ ರಣಧೀರ್ ಜೈಸ್ವಾಲ್, ಜಮ್ಮು ಮತ್ತು ಕಾಶ್ಮೀರ ಹಾಗೂ ಲಡಾಖ್ ಕೇಂದ್ರಾಡಳಿತ ಪ್ರದೇಶಗಳು ಸೇರಿದಂತೆ ಭಾರತದ ಸಂಪೂರ್ಣ ಸಾರ್ವಭೌಮ ಭೂಪ್ರದೇಶವನ್ನು ಭಾರತ ಸರ್ಕಾರ ಬಿಡುಗಡೆ ಮಾಡಿರುವ ಅಧಿಕೃತ ಭೂಪಟಕ್ಕೆ ಅನುಗುಣವಾಗಿಯೇ ಚಿತ್ರಿಸಬೇಕು ಎಂದು ಪ್ರತಿಪಾದಿಸಿದರು. ಯಾವುದೇ ರೀತಿಯ ತಪ್ಪಾದ ಅಥವಾ ದಾರಿತಪ್ಪಿಸುವ ನಕ್ಷೆಗಳ ಚಿತ್ರಣವನ್ನು ದೇಶವು ಒಪ್ಪಿಕೊಳ್ಳುವುದಿಲ್ಲ ಎಂದ ಅವರು, ಭಾರತದ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಯ ವಿಚಾರದಲ್ಲಿ ಸರ್ಕಾರದ ನಿಲುವು ಸ್ಪಷ್ಟ ಹಾಗೂ ಸಂಧಾನಾತೀತವಾಗಿದೆ ಎಂದು ಪುನರುಚ್ಚರಿಸಿದರು.

<><><><>

ನವದೆಹಲಿಯ ಸತ್ಯನಿಕೇತನ ಪ್ರದೇಶದಲ್ಲಿ ಇಂದು ಮಧ್ಯಾಹ್ನ ಬಹುಮಹಡಿ ಕಟ್ಟಡವೊಂದು ಕುಸಿದು ಬಿದ್ದಿದ್ದು, ಘಟನೆಯಲ್ಲಿ ಓರ್ವ ವ್ಯಕ್ತಿ ಮೃತಪಟ್ಟು, ಹಲವರು ಗಾಯಗೊಂಡಿದ್ದಾರೆ. ದೆಹಲಿಯ ಅಖಿಲ ಭಾರತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ-ಏಮ್ಸ್ ನೀಡಿರುವ ಮಾಹಿತಿಯಂತೆ, ನಾಲ್ಕು ಜನರನ್ನು ಟ್ರಾಮಾ ಸೆಂಟರ್‌ಗೆ ಕರೆತರಲಾಗಿದ್ದು, ಅವರಲ್ಲಿ ಓರ್ವ ವ್ಯಕ್ತಿ ಮೃತಪಟ್ಟಿದ್ದಾರೆ. ಇಬ್ಬರ ಸ್ಥಿತಿ ಚಿಂತಾಜನಕವಾಗಿದ್ದು, ಮತ್ತೊಬ್ಬರಿಗೆ ಚಿಕಿತ್ಸೆ ನೀಡಿ ಡಿಸ್ಚಾರ್ಜ್ ಮಾಡಲಾಗಿದೆ. ಸ್ಥಳೀಯ ದೆಹಲಿ ಪೊಲೀಸರು ಈವರೆಗೆ ಆರು ಜನರನ್ನು ರಕ್ಷಿಸಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಸ್ಥಳೀಯ ವಿಚಾರಣೆ ವೇಳೆ ಈ ಕಟ್ಟಡವು ಸುಮಾರು ೪೦ ರಿಂದ ೫೦ ವರ್ಷಗಳಷ್ಟು ಹಳೆಯದಾಗಿದ್ದು, ಘಟನೆ ಸಂಭವಿಸಿದ ಸಮಯದಲ್ಲಿ ಕಟ್ಟಡದ ತಳಮಹಡಿಯಲ್ಲಿ ಕೆಲವು ದುರಸ್ತಿ ಕಾಮಗಾರಿಗಳು ನಡೆಯುತ್ತಿದ್ದವು ಎಂದು ತಿಳಿದುಬಂದಿದೆ. ದುರಂತ ಸಂಭವಿಸಿದ ಸ್ಥಳದಲ್ಲಿ ದೆಹಲಿ ಅಗ್ನಿಶಾಮಕ ದಳವು ೧೮ ಅಗ್ನಿಶಾಮಕ ವಾಹನಗಳನ್ನು ನಿಯೋಜಿಸಿ ರಕ್ಷಣೆ ಮತ್ತು ಪರಿಹಾರ ಕಾರ್ಯಾಚರಣೆಯನ್ನು ಚುರುಕುಗೊಳಿಸಿದೆ. ಘಟನಾ ಸ್ಥಳದಲ್ಲಿ ಶೀಘ್ರ ರಕ್ಷಣಾ ಕಾರ್ಯಗಳನ್ನು ಖಚಿತಪಡಿಸಿಕೊಳ್ಳಲು ದೆಹಲಿ ಪೊಲೀಸ್, ಅಗ್ನಿಶಾಮಕ ದಳ ಮತ್ತು ದೆಹಲಿ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಸೇರಿದಂತೆ ಎಲ್ಲಾ ಸಂಬಂಧಪಟ್ಟ ಸಂಸ್ಥೆಗಳು ಸಂಪೂರ್ಣ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವಂತೆ ದೆಹಲಿ ಉಪರಾಜ್ಯಪಾಲ ತರಂಜಿತ್ ಸಿಂಗ್

ಸಂಧು ಸೂಚಿಸಿದ್ದಾರೆ. ಪರಿಸ್ಥಿತಿಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದ್ದು, ಸಂತ್ರಸ್ತರಿಗೆ ಸಾಧ್ಯವಿರುವ ಎಲ್ಲಾ ನೆರವು ತಲುಪಿಸುವುದನ್ನು ಖಚಿತಪಡಿಸಿಕೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ. ಇನ್ನು ಕಟ್ಟಡ ಕುಸಿತದ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಪಕ್ಕದ ಕಟ್ಟಡವನ್ನೂ ಖಾಲಿ ಮಾಡಿಸಲಾಗಿದ್ದು, ಸಿಲುಕಿರುವವರನ್ನು ಸುರಕ್ಷಿತವಾಗಿ ರಕ್ಷಿಸಲು ಹಾಗೂ ಬಾಧಿತ ಕುಟುಂಬಗಳಿಗೆ ತಕ್ಷಣದ ನೆರವು ನೀಡಲು ಎಲ್ಲಾ ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿ ರೇಖಾ ಗುಪ್ತಾ ತಿಳಿಸಿದ್ದಾರೆ. ಈ ನಡುವೆ ಕಟ್ಟಡ ಕುಸಿತ ಘಟನೆ ಬೆನ್ನಲ್ಲೇ ಕೇಂದ್ರ ಗೃಹ ಸಚಿವ ಅಮಿತ್ ಶಾ, ತಮ್ಮ ನಿಗದಿತ ಗೋವಾ ಪ್ರವಾಸವನ್ನು ರದ್ದುಗೊಳಿಸಿದ್ದಾರೆ.

<><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇದೇ ೮ರಿಂದ ೧೦ರವರೆಗೆ ಶ್ರೀಲಂಕಾಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ. ಈ ಭೇಟಿಯ ಅವಧಿಯಲ್ಲಿ ಅವರು, ಶ್ರೀಲಂಕಾದ ಉನ್ನತ ನಾಯಕರೊಂದಿಗೆ ಸಮಾಲೋಚನೆ ನಡೆಸಲಿದ್ದಾರೆ ಮತ್ತು ಕೊಲಂಬೊದಲ್ಲಿರುವ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಬಳಿಕ ಅವರು, ರಕ್ಷಣಾ ಸಚಿವಾಲಯ ಮತ್ತು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಹಿರಿಯ ಅಧಿಕಾರಿಗಳನ್ನೊಳಗೊಂಡ ಉನ್ನತ ಮಟ್ಟದ ನಿಯೋಗದ ನೇತೃತ್ವವನ್ನೂ ವಹಿಸಲಿದ್ದಾರೆ.

<><><>

ಸ್ಥಳೀಯ ಜೀವವೈವಿಧ್ಯ ಮತ್ತು ಸಾಂಪ್ರದಾಯಿಕ ಜ್ಞಾನವನ್ನು ಅಧಿಕೃತವಾಗಿ ದಾಖಲಿಸಲು ಸ್ಥಳೀಯ ಹಂತದ ಯೋಜನೆಗಳು ಅತ್ಯಗತ್ಯ ಎಂದು ಕೇಂದ್ರ ಪರಿಸರ ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ತಿಳಿಸಿದ್ದಾರೆ. ಚಂಡೀಗಢದಲ್ಲಿಂದು ನಡೆದ ರಾಜ್ಯ ಜೀವ ವೈವಿಧ್ಯ ಮಂಡಳಿ ಮತ್ತು ಕೇಂದ್ರಾಡಳಿತ ಪ್ರದೇಶಗಳ ಜೀವ ವೈವಿಧ್ಯ ಸಮಿತಿಗಳ ೧೬ನೇ ರಾಷ್ಟ್ರೀಯ ಸಮ್ಮೇಳನದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಭಾರತದ ಸುದೀರ್ಘ ಪರಿಸರ ಸ್ನೇಹಿ ಪರಂಪರೆ ಮತ್ತು ತತ್ವಗಳನ್ನು ಸ್ಮರಿಸಿ, ಮಿಷನ್ ಲೈಫ್, ಏಕ್ ಪೇಡ್ ಮಾ ಕೇ ನಾಮ್, ಅಮೃತ್ ಸರೋವರ್ ಹಾಗೂ ಗ್ರೀನ್ ಕ್ರೆಡಿಟ್ ಕಾರ್ಯಕ್ರಮಗಳಂತಹ ಕೇಂದ್ರ ಸರ್ಕಾರದ ಪ್ರಮುಖ ಪರಿಸರ ಸ್ನೇಹಿ ಉಪಕ್ರಮಗಳನ್ನು ಉಲ್ಲೇಖಿಸಿದರು.

<><><>

ಆಫ್ರಿಕಾದ ದ್ವೀಪ ರಾಷ್ಟ್ರವಾದ ಕೇಪ್ ವರ್ಡೆಯಲ್ಲಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಕನಿಷ್ಠ ೨೫ ಮಂದಿ ಮೃತಪಟ್ಟಿದ್ದು, ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಫೊಗೊ ದ್ವೀಪದ ಅತ್ಯಂತ ಕಡಿದಾದ ಕ್ಯಾಂಪನಾಸ್ ಡಿ ಸಿಮಾ ಪರ್ವತ ಮಾರ್ಗದಲ್ಲಿ ಪ್ರಯಾಣಿಕರ ಬಸ್ ಚಾಲಕನ ನಿಯಂತ್ರಣ ತಪ್ಪಿ ಮಗುಚಿಬಿದ್ದ ಪರಿಣಾಮ ದುರಂತ ಸಂಭವಿಸಿದೆ.

<><><><>

ಈಜಿಪ್ಟ್‌ನ ಎಲ್ ಅಲಮೇನ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇದೇ ೮ ರಿಂದ ೧೦ ರವರೆಗೆ ನಡೆಯಲಿರುವ 'ಎಲ್ ಅಲಮೇನ್ ಅಂತಾರಾಷ್ಟ್ರೀಯ ವೈಮಾನಿಕ ಪ್ರದರ್ಶನದ ಎರಡನೇ ಆವೃತ್ತಿಯಲ್ಲಿ ಪಾಲ್ಗೊಳ್ಳಲು ಭಾರತೀಯ ವಾಯುಪಡೆಯ 'ಸಾರಂಗ್' ಹೆಲಿಕಾಪ್ಟರ್ ಪ್ರದರ್ಶನ ತಂಡ ಈಜಿಪ್ಟ್‌ಗೆ ತಲುಪಿದೆ.  ಈ ವಾಯು ಪ್ರದರ್ಶನದಲ್ಲಿ ಸಾರಂಗ್ ತಂಡವು ಅತ್ಯಂತ ನಿಖರತೆ, ವೃತ್ತಿಪರತೆ ಹಾಗೂ ವಿಮಾನ ಹಾರಾಟದ ಕೌಶಲ್ಯಗಳನ್ನು ಪ್ರದರ್ಶಿಸಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<><><><>

ಚೀನಾದ ಶೆನ್‌ಜೆನ್‌ನಲ್ಲಿ ನಡೆದ ಚೀನಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಪುರುಷರ ಡಬಲ್ಸ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದೆ. ಇಂದು ನಡೆದ ಫೈನಲ್ ಪಂದ್ಯದಲ್ಲಿ ಭಾರತದ ಜೋಡಿ ಚೀನಾದ ಹೆ ಜಿ ಟಿಂಗ್ ಮತ್ತು ರೆನ್ ಕ್ಸಿಯಾಂಗ್ ಯು ಜೋಡಿಯನ್ನು ೧೧-೨೧, ೨೧-೧೩, ೨೧-೧೭ ಅಂತರದಲ್ಲಿ ಪರಾಭವಗೊಳಿಸಿತು. ಈ ಗೆಲುವಿನೊಂದಿಗೆ ಚೀನಾ ಮಾಸ್ಟರ್ಸ್ ಇತಿಹಾಸದಲ್ಲೇ ಭಾರತಕ್ಕೆ ಚೊಚ್ಚಲ ಸ್ವರ್ಣ ಪದಕ ತಂದುಕೊಟ್ಟ ಕೀರ್ತಿಗೆ ಸಾತ್ವಿಕ, ಚಿರಾಗ್ ಜೋಡಿ ಭಾಜನವಾಗಿದೆ. ಇದು ಈ ಇಬ್ಬರು ಆಟಗಾರರ ವೃತ್ತಿಜೀವನದ ೧೦ನೇ ಡಿಡಬ್ಲ್ಯೂಎಫ್ ವಿಶ್ವ ಟೂರ್ ಪ್ರಶಸ್ತಿಯಾಗಿದೆ. ಈ ಭಾರತೀಯ ಜೋಡಿ ಇದಕ್ಕೂ ಮುನ್ನ ೨೦೨೩ ಹಾಗೂ ೨೦೨೫ರ ಚೀನಾ ಮಾಸ್ಟರ್ಸ್‌ನಲ್ಲಿ ರನ್ನರ್ ಅಪ್ ಆಗಿತ್ತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>